ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**
**PAPER CLIPPINGS**

23

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ ದಿನಾಂಕ : DATE 19/12/20

# ಬಿಬಿಎಂಪಿ ಚುನಾವಣೆಗೆ ತಡೆ

## 6 ವಾರದಲ್ಲಿ ಚುನಾವಣೆ ಘೋಷಿಸುವಂತೆ ಆದೇಶ ನೀಡಿದ್ದ ಹೈಕೋರ್ಟ್ ಇದನ್ನು ಪ್ರಶ್ನಿಸಿ ಸುಪ್ರೀಂಗೆ ಅರ್ಜಿ ಸಲ್ಲಿಸಿದ್ದ ರಾಜ್ಯ ಸರ್ಕಾರ | ಆದೇಶಕ್ಕೆ ತಡೆ

• **ಕನ್ನಡಪ್ರಭ ವಾರ್ತೆ** ನವದೆಹಲಿ 19/12/20

ಮುಂದಿನ ಆರು ವಾರಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ(ಬಿಬಿಎಂಪಿ) ಚುನಾವಣೆ ಘೋಷಿಸಬೇಕು ಎಂದು ನಿರ್ದೇಶಿಸಿದ್ದ ಕರ್ನಾಟಕ ಹೈಕೋರ್ಟ್‌ನ ಆದೇಶಕ್ಕೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ.

ಬಿಬಿಎಂಪಿ ಚುನಾವಣೆಗೆ ತಡೆ ನೀಡಬೇಕು ಎಂದು ಕರ್ನಾಟಕ ಸರ್ಕಾರ ಸಲ್ಲಿಸಿದ್ದ ಅರ್ಜಿಯನ್ನು ವಿಚಾರಣೆ ಮಾಡಿದ ಮುಖ್ಯ ನ್ಯಾಯಮೂರ್ತಿ ಎಸ್.ಎ. ಬೊಬ್ಡೆ ನೇತೃತ್ವದ ತ್ರಿಸದಸ್ಯ ಪೀಠ, ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿ, ಚುನಾವಣೆ ಪ್ರಕ್ರಿಯೆಗೆ ತಡೆ ನೀಡಿದೆ. ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರಕ್ಕೆ ತಾತ್ಕಾಲಿಕ ರಿಲೀಫ್ ಸಿಕ್ಕಂತಾಗಿದೆ. ಆರು ವಾರಗಳಲ್ಲಿ ಚುನಾವಣೆ ಘೋಷಣೆ ಮಾಡುವಂತೆ ಹೈಕೋರ್ಟ್ ನೀಡಿದ್ದ ಆದೇಶವನ್ನು ಪ್ರಶ್ನಿಸಿ ರಾಜ್ಯ ಸರ್ಕಾರ ಮೇಲ್ಮನವಿ ಸಲ್ಲಿಸಿತ್ತು.

ಬಿಬಿಎಂಪಿಗೆ ಹೊಸ ರೂಪ ನೀಡಲಾಗುತ್ತಿದೆ. ಅಲ್ಲದೆ 1976ರ ಕೆಎಂಸಿ ಕಾಯ್ದೆಗೆ ತಿದ್ದುಪಡಿ ತರಲಾಗುತ್ತಿದೆ. ಬೆಂಗಳೂರಿನಲ್ಲಿ ಪ್ರಸ್ತುತ ಇರುವ 198 ವಾರ್ಡ್‌ಗಳಿಂದ 243 ವಾರ್ಡ್‌ಗಳಿಗೆ ಹೆಚ್ಚಿಸಲಾಗುತ್ತದೆ. ಇದಕ್ಕೆ ಸಮಯ ಬೇಕಿದ್ದು ಹೈಕೋರ್ಟ್ ಆದೇಶದಂತೆ ಆರು ವಾರಗಳಲ್ಲಿ ಚುನಾವಣಾ ಘೋಷಣೆ ಮಾಡಲು ಸಾಧ್ಯವಿಲ್ಲ ಎಂದು ರಾಜ್ಯ ಸರ್ಕಾರದ ಪರ ವಕೀಲರು ವಾದ ಮಂಡಿಸಿದರು.

ದೂರುದಾರ ಮಾಜಿ ಕಾರ್ಪೊರೇಟರ್ ಶಿವರಾಜ್ ಮತ್ತು ಇತರರು ಕೇವಿಯೇಟ್ ಸಲ್ಲಿಸಿದ್ದ ಹಿನ್ನಲೆಯಲ್ಲಿ ಸುಪ್ರೀಂಕೋರ್ಟ್ ಪ್ರತಿವಾದಿಗಳಿಗೆ ನೋಟಿಸ್ ಜಾರಿ ಮಾಡಿ, ಪ್ರತಿಕ್ರಿಯೆ ನೀಡುವಂತೆ ಸೂಚನೆ ನೀಡಿತು. ಸುಪ್ರೀಂಕೋರ್ಟ್‌ಗೆ ಡಿಸೆಂಬರ್ 19ರಿಂದ ಕ್ರಿಸ್‌ಮಸ್ ರಜೆ ಶುರುವಾಗಲಿದ್ದು, ಬಳಿಕ ವಿಸ್ತೃತ ವಿಚಾರಣೆ ನಡೆಸಲಿದೆ. ಈ ಹಿಂದೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಚುನಾವಣೆ ನಡೆಸಬೇಕೆಂದು ಹೈಕೋರ್ಟ್ ಡಿಸೆಂಬರ್ 4ರಂದು ಆದೇಶಿಸಿತ್ತು. ಹೈಕೋರ್ಟ್ ತೀರ್ಪಿನಲ್ಲಿ ರಾಜ್ಯ ಸರ್ಕಾರ ಪಾಲಿಕೆಯನ್ನು ಈಗಿರುವ 198 ವಾರ್ಡ್‌ಗಳಿಂದ 243 ವಾರ್ಡ್‌ಗಳಿಗೆ ಹೆಚ್ಚಿಸಲು ಕೆಎಂಸಿ ಕಾಯ್ದೆಗೆ ತಿದ್ದುಪಡಿ ತಂದಿರುವ ಕ್ರಮ ಸರಿಯಾಗಿದೆ. ಆದರೂ ಈ ತಿದ್ದುಪಡಿ ಚುನಾವಣೆಗೆ ಅನ್ವಯಿಸಲ್ಲ. ಅಲ್ಲದೇ ಸಂವಿಧಾನದ ವಿಧಿ 243(ಯು) ಪ್ರಕಾರವೇ ಚುನಾವಣೆ ನಡೆಸಬೇಕು. ಪ್ರಸ್ತುತ ಇರುವ 198 ವಾರ್ಡ್‌ಗಳಿಗೆ ಚುನಾವಣೆ ನಡೆಸಬೇಕೆಂದು ನಿರ್ದೇಶನ ನೀಡಿತ್ತು. ಆದರೆ ಹೈಕೋರ್ಟ್ ಆದೇಶ ಪ್ರಶ್ನಿಸಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೆಟ್ಟಿಲೇರಿತ್ತು.

## ‘ಸೂಕ್ತ ವಾದ ಮಂಡಿಸುತ್ತೇವೆ’

ಪ್ರಕರಣದ ಪ್ರತಿವಾದಿ ಮಾಜಿ ಕಾರ್ಪೊರೇಟರ್ ಶಿವರಾಜ್, ನ್ಯಾಯಾಲಯ ಜಾರಿ ಮಾಡಲಿರುವ ನೋಟಿಸ್‌ಗೆ 2021 ಫೆಬ್ರವರಿ 5ರಂದು ನಡೆಯಲಿರುವ ವಿಚಾರಣೆಯಲ್ಲಿ ಸೂಕ್ತ ವಾದ ಮಂಡಿಸಲಿದ್ದೇವೆ. ಅದಕ್ಕೂ ಮುನ್ನ ಪಕ್ಷದ ನಾಯಕರು, ಮುಖಂಡರೊಂದಿಗೆ ಚರ್ಚಿಸಿ ತೀರ್ಮಾನಕ್ಕೆ ಗೊಳ್ಳಲಾಗುವುದು ಎಂದು ‘ಕನ್ನಡಪ್ರಭ’ಕ್ಕೆ ತಿಳಿಸಿದ್ದಾರೆ.



ಪಾಲಿಕೆ ಮಾಜಿ ಸದಸ್ಯ ಅಬ್ದುಲ್ ವಾಜೀದ್, ಹೈಕೋರ್ಟ್ ನೀಡಿರುವ ತೀರ್ಪನ್ನು ಸುಪ್ರೀಂ ಕೋರ್ಟ್ ಎತ್ತಿಹಿಡಿಯುತ್ತದೆ ಎಂದು ಭಾವಿಸಿದ್ದೆವು. ಆದರೆ, ನೋಟಿಸ್ ಜಾರಿ ಮಾಡುವಂತೆ ಸೂಚನೆ ನೀಡಿ, ಚುನಾವಣೆಗೆ ತಡೆಯಾಜ್ಞೆ ನೀಡಿದೆ. ಚುನಾವಣೆ ಜರೂರಿನ ವಿಷಯವಾಗಿದ್ದು, ನ್ಯಾಯಾಲಯ ಕ್ರಿಸ್‌ಮಸ್ ರಜೆ ಮುಗಿದ ಕೂಡಲೇ ಪ್ರಕರಣ ಕೈಗೆತ್ತಿಕೊಳ್ಳಬಹುದಿತ್ತು. ಆದರೆ, ಫೆ.5ರವರೆಗೆ ಕಾಲಾವಕಾಶ ನೀಡಿದೆ. ಜತೆಗೆ ರಾಜ್ಯ ಚುನಾವಣಾ ಆಯೋಗ ಕೇವಿಯೆಟ್ ಹಾಕಿಕೊಳ್ಳದಿರುವುದು ಸರಿಯಾದ ನಡೆಯಲ್ಲ. ಆದರೂ ಮುಂದಿನ ದಿನಗಳಲ್ಲಿ ನಮಗೆ ನ್ಯಾಯ ಸಿಗುತ್ತದೆ ಎಂಬ ನಂಬಿಕೆ ಇದೆ ಎಂದರು.